ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):

ಅ) ಬಂದಿದೆ. ಈ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಮತ್ತು ಇ) ಈ ಎಲ್ಲಾ ಅಂಶಗಳನ್ನು ಗಂಭೀರವಾಗಿ ಪರಿಶೀಲಿಸಲಾಗುತ್ತಿದ್ದು, ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

517(459) ಶ್ರೀ ನಾಗರಾಜು ಎಂ.ಟಿ.ಬಿ. (ಹೊಸಕೋಟೆ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) 2006-07ನೇ ಪ್ರಸಕ್ತ ಸಾಲಿನಲ್ಲಿ ಹೊಸಕೋಟೆ ತಾಲ್ಲೂಕಿಗೆ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಯಾವ ಯಾವ ಸ್ಥಳದಲ್ಲಿ ಪ್ರೌಢಶಾಲೆ ಮಂಜೂರು ಮಾಡಲು ಕೋರಿಕೆ ಬಂದಿದೆ;

ಇ) ಈ ತಾಲ್ಲೂಕಿಗೆ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಹೌದು.

ಆ) ಉಮ್ಮಲು

ಇ) 2006-07ನೇ ಸಾಲಿಗೆ ಹೊಸಕೋಟೆ ತಾಲ್ಲೂಕಿನ ದೊಡ್ಡಕೆಲ್ಲೂರು ಗ್ರಾಮಕ್ಕೆ ಹೊಸ ಸರ್ಕಾರಿ ಪ್ರೌಢಾಲೆಯನ್ನು ಮಂಜೂರು ಮಾಡಲಾಗಿದೆ.

518(690) ಶ್ರೀ ಜೆ. ನರಸಿಂಹಸ್ವಾಮಿ (ದೊಡ್ಡಬಳ್ಳಾಪುರ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ನೂತನವಾಗಿ ಮೂರು ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಈ ಹಿಂದೆ ತಾಂತ್ರಿಕ ಹಾಗೂ ಹಣಕಾಸು ಇಲಾಖೆಗಳ ಒಪ್ಪಿಗೆಗೆ ಕಳುಹಿಸಿದ್ದು ನಿಜವಲ್ಲವೇ;

ಆ) ಈ ಸರ್ಕಾರ ಅಸ್ತಿತ್ವಕ್ಕೆ ಬಂದ ಮೇಲೆ ದೊಡ್ಡಬಳ್ಳಾಪುರ ತಾಲ್ಲೂಕಿನ ಮೇಲೆ ಮಲತಾಯಿ ಧೋರಣೆ ನೀತಿಯನ್ನು ಅನುಸರಿಸುತ್ತಿದೆಯೇ,

ಇ) ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಮಂಜೂರಾತಿ ನೀಡಿರುವ ಹೊಸ ಪ್ರೌಢಶಾಲೆಗಳಲ್ಲಿ ಸರ್ಕಾರದ ಆದೇಶ ದಿನಾಂಕ 21 7 2006ರಂದು ರಾಮನಗರ, ಮಾಗಡಿ, ದೇವನಹಳ್ಳಿ ಮತ್ತು ಕನಕಪುರ ತಾಲ್ಲೂಕುಗಳಿಗೆ ಮಾತ್ರ ಹೊಸ ಪ್ರೌಢಶಾಲೆಗಳನ್ನು ಮಂಜೂರು ಮಾಡಿ ದೊಡ್ಡಬಳ್ಳಾಪುರ ತಾಲ್ಲೂಕನ್ನು ನಿರ್ಲಕ್ಷಿಸಿರುವುದು ಸರಿಯೇ, ಇದಕ್ಕೆ ಕಾರಣಗಳೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಆಯವ್ಯಯದಲ್ಲಿನ ಅವಕಾಶ ಹಾಗೂ ಶೈಕ್ಷಣಿಕ ಅಗತ್ಯತೆ, ಇವುಗಳನ್ನು ಗಮನದಲ್ಲಿಟ್ಟುಕೊಂಡು, ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಹಂತ ಹಂತವಾಗಿ ಮಂಜೂರು ಮಾಡಲಾಗುತ್ತಿದೆ

ಆ) ಇಲ್ಲ

ಇ) ದಿನಾಂಕ 30 9 2006ರ ಆದೇಶ ಸಂಖ್ಯೆ ಇಡಿ 54 ಎಸ್‌ಇಎಸ್ 2006ರಲ್ಲಿ 2006–07ನೇ ಸಾಲಿನಲ್ಲಿ ದೊಡ್ಡಬಳ್ಳಾಪುರ ನಗರಕ್ಕೆ ಪ್ರೌಢಶಾಲೆ ಮಂಜೂರಾಗಿದೆ ಆದ್ದರಿಂದ ದೊಡ್ಡಬಳ್ಳಾಪುರ ತಾಲ್ಲೂಕು ನಿರ್ಲಕ್ಷೆಯಾಗಿರುವುದಿಲ್ಲ

520(863) ಶ್ರೀ ಪದ್ಮನಾಭ ಕೊಟ್ಟಾರಿ ಕೆ (ವಿಟ್ಲ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಕನ್ನಡ ಮಾಧ್ಯಮ ಶಾಲೆಗಳೆಂದು ಸರ್ಕಾರದ ಅನುಮತಿ ಪಡೆದುಕೊಂಡು ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡುತ್ತಿರುವ ಒಟ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು,

ಆ) ಅಂಥವುಗಳ ಮೇಲೆ ಸರ್ಕಾರ ಜರುಗಿಸಿದ ಕ್ರಮಗಳೇನು, ಇವುಗಳನ್ನು ಸಕ್ರಮೀಕರಿಸಿರುವ ಯೋಜನೆ ಸರ್ಕಾರದ ಮುಂದಿದೆಯೇ,